# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತೊಂಬತ್ತನೆಯ ಅಧಿವೇಶನ**

**ಕಾರ್ಯಕಲಾಪಗಳ ಪಟ್ಟಿ**

**ಗುರುವಾರ, 10ನೇ ಅಕ್ಟೋಬರ್, 2019**

**(ಸಮಯ: ಬೆಳಗ್ಗೆ 11.00 ಗಂಟೆಗೆ)**

******

## 01. ಸಂತಾಪ ಸೂಚನೆಗಳು

## 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ಶ್ರೀ ಬಿ.ಎಸ್. ಯಡಿಯೂರಪ್ಪ** (ಮುಖ್ಯಮಂತ್ರಿಗಳು) ಅವರು:-

ಅ) ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು 31ನೇ ಮಾರ್ಚ್, 2018ಕ್ಕೆ ಕೊನೆಗೊಂಡ ವರ್ಷಕ್ಕೆ ನೀಡಿರುವ **ರಾಜಸ್ವ ವಲಯದ** ಮೇಲಿನ ವರದಿಯನ್ನು **(ಸಂಖ್ಯೆ-1)** ಸಭೆಯ ಮುಂದಿಡುವುದು.

ಆ) ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು 31ನೇ ಮಾರ್ಚ್, 2018ಕ್ಕೆ ಕೊನೆಗೊಂಡ ವರ್ಷಕ್ಕೆ ನೀಡಿರುವ **ಆರ್ಥಿಕ ವಲಯದ** ಮೇಲಿನ ವರದಿಯನ್ನು **(ಸಂಖ್ಯೆ-3)** ಸಭೆಯ ಮುಂದಿಡುವುದು.

ಇ) ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಒಂದನೇ ಹಾಗೂ ಎರಡನೇ ಪಟ್ಟಿಯ ರೀತ್ಯಾ.

## 03. ವಿತ್ತೀಯ ಕಾರ್ಯಕಲಾಪ

**ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು)** ಭಾರತ ಸಂವಿಧಾನದ 205(1)(ಎ) ನೇ ಅನುಚ್ಛೇದದ ಮೇರೆಗೆ 2017-18ನೇ ಸಾಲಿನ ಧನವಿನಿಯೋಗ ಹಾಗೂ ಹಣಕಾಸು ಲೆಕ್ಕಗಳು (ಸಂಪುಟ 1 ಮತ್ತು 2ನ್ನು) ಒಪ್ಪಿಸುವುದು.

## 04. ಕಾರ್ಯದರ್ಶಿಯವರ ವರದಿ

**ಕಾರ್ಯದರ್ಶಿಯವರು: -**

ಕಳೆದ ಅಧಿವೇಶನದಿಂದೀಚೆಗೆ ರಾಷ್ಟ್ರಪತಿ/ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸುವುದು.

......2

## ೦5. ವರದಿಗಳನ್ನೊಪ್ಪಿಸುವುದು

ಅ) **ಶ್ರೀ ಆರ್. ಧರ್ಮಸೇನ** (ಸದಸ್ಯರು, ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ) ಅವರು **ಕರ್ನಾಟಕ ವಿಧಾನ ಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ** 2018-19ನೇ ಸಾಲಿನ **2ನೇ** ವರದಿಯನ್ನು ಒಪ್ಪಿಸುವುದು.

ಆ) **ಶ್ರೀ ಎಂ.ಕೆ.ಪ್ರಾಣೇಶ್** (ಸದಸ್ಯರು, ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿ) ಅವರು **ವಿಧಾನ ಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯ 28ನೇ(ಅನುಪಾಲನಾ)** ವರದಿಯನ್ನು ಒಪ್ಪಿಸುವುದು.

## ೦6. ಗಮನ ಸೆಳೆಯುವ ಸೂಚನೆಗಳು

ಅ) **ಶ್ರೀ ಕೆ.ಸಿ. ಕೊಂಡಯ್ಯ** ಅವರು ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಜಾತಿಗಣತಿಯ ಸಮೀಕ್ಷೆಯನ್ನು ನಡೆಸಲಾಗಿದ್ದು, ವರದಿಯನ್ನು ಮಂಡಿಸದಿರುವ ಬಗ್ಗೆ **ಮಾನ್ಯ ಉಪ ಮುಖ್ಯಮಂತ್ರಿಗಳು ಮತ್ತು ಲೋಕೋಪಯೋಗಿ, ಸಮಾಜ ಕಲ್ಯಾಣ ಸಚಿವರ** ಗಮನ ಸೆಳೆಯುವುದು

ಆ) **ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ** ಅವರು ಅನುದಾನ ರಹಿತ ಆಂಗ್ಲ ಮಾಧ್ಯಮ ಶಾಲೆಗಳ ಸಿಬ್ಬಂದಿಯವರಿಗೆ ಸಿಗಬೇಕಾದ ಕನಿಷ್ಠ ಸೌಲಭ್ಯಗಳನ್ನು ಒದಗಿಸದಿರುವ ಶಿಕ್ಷಣ ಸಂಸ್ಥೆಗಳ ಮಾನ್ಯತೆಯನ್ನು ರದ್ದುಪಡಿಸುವ ಬಗ್ಗೆ **ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ, ಕಾರ್ಮಿಕ ಸಚಿವರ** ಗಮನ ಸೆಳೆಯುವುದು.

ಇ) **ಶ್ರೀ ಕೆ.ಟಿ ಶ್ರೀಕಂಠೇಗೌಡ** ಅವರು ರಾಜ್ಯದಲ್ಲಿ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕೊರೆಯಿಸಲಾದ ಅನೇಕ ಕೊಳವೆ ಬಾವಿಗಳಿಗೆ ಇದುವರೆವಿಗೂ ವಿದ್ಯುತ್ ಸಂಪರ್ಕವನ್ನು ಒದಗಿಸದೆ ಇರುವ ಬಗ್ಗೆ **ಮಾನ್ಯ ಉಪ ಮುಖ್ಯಮಂತ್ರಿಗಳು ಮತ್ತು ಲೋಕೋಪಯೋಗಿ, ಸಮಾಜ ಕಲ್ಯಾಣ ಸಚಿವರ** ಗಮನ ಸೆಳೆಯುವುದು

ಈ) **ಶ್ರೀ ಅ.ದೇವೇಗೌಡ** ಅವರು ರಾಜ್ಯ ಒಕ್ಕಲಿಗರ ಸಂಘದಲ್ಲಿ ನಡೆದಿರುವ ಅಧಿಕಾರ ದುರುಪಯೋಗ, ಕಾನೂನು ಬಾಹಿರ ಕೆಲಸ ಮತ್ತು ಅವ್ಯವಹಾರಗಳ ಬಗ್ಗೆ ಮಾನ್ಯ **ಗೃಹ ಮತ್ತು ಸಹಕಾರ ಸಚಿವರ** ಗಮನ ಸೆಳೆಯುವುದು

......3

**೦7. ನಿಯಮ ೩೩೦ರ ಮೇರೆಗೆ**

ಅ) **ಶ್ರೀ ಮರಿತಿಬ್ಬೇಗೌಡ** ಅವರು ಬೆಂಗಳೂರು ನಗರದ ಎಲೆಕ್ಟ್ರಾನಿಕ್ ಸಿಟಿ ಪ್ರಾದೇಶಿಕ ಸಾರಿಗೆ ಕಛೇರಿಯಲ್ಲಿ 2015ನೇ ಸಾಲಿನಿಂದ ಭಾರತ್-೦೩ ವಾಯುಮಾಲಿನ್ಯ ನಾಲ್ಕು ಚಕ್ರದ ಸಾವಿರಾರು ವಾಹನಗಳನ್ನು ಕಾನೂನು ಬಾಹಿರವಾಗಿ ಅಧಿಕಾರಿಗಳು ಶಾಮೀಲಾಗಿ ನೋಂದಣಿ ಮಾಡಿರುವುದಲ್ಲದೆ, ಇಲಾಖೆಯ ಬೊಕ್ಕಸಕ್ಕೆ ಲಕ್ಷಾಂತರ ರೂಪಾಯಿಗಳ ನಷ್ಟವುಂಟು ಮಾಡಿರುವ ಬಗ್ಗೆ ಪ್ರಸ್ತಾಪಿಸುವುದು.

ಆ) **ಶ್ರೀ ಐವನ್ ಡಿ' ಸೋಜಾ** ಅವರು ದಕ್ಷಿಣ ಕನ್ನಡ ಜಿಲ್ಲೆಯ ಹಳೆಯಂಗಡಿ ಗ್ರಾಮ ಪಂಚಾಯತಿ ಕಾನೂನು ಬದ್ಧವಾಗಿ ಕಾರ್ಯನಿರ್ವಹಿಸುತ್ತಿದ್ದರೂ ಜಿಲ್ಲಾ ಪಂಚಾಯತ್ ಬರ್ಕಾಸ್ತು ಮಾಡಲು ನಿರ್ಣಯ ಕೈಗೊಂಡಿರುವ ಬಗ್ಗೆ ಪ್ರಸ್ತಾಪಿಸುವುದು.

ಇ) **ಶ್ರೀ ಪಿ.ಆರ್. ರಮೇಶ್** ಅವರು ಬೃಹತ್ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಭೂಪರಿವರ್ತನೆಯಾಗದೆ ಅನಧಿಕೃತವಾಗಿ ನಿರ್ಮಿಸಿರುವ ರೆವಿನ್ಯೂ ನಿವೇಶನಗಳಿಗೆ ಸುಧಾರಣಾ ವೆಚ್ಚ/ಮೇಲ್ವಾಟು ವೆಚ್ಚ ಪಾವತಿಸಿಕೊಂಡು ಸದರಿ ನಿವೇಶನಗಳನ್ನು ಸಕ್ರಮಗೊಳಿಸುವ ಯೋಜನೆ ಬಗ್ಗೆ ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.

**www.kla.kar.nic.in/council.htm**